# ಬೆಂಗಳೂರು ಮಹಾನಗರ ಪಾಲಿಕೆ

***ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28 ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 21-11-2020 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು***

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀ ಪಿ. ಮುರುಳೀಧರ್, ಸ್ಥಳೀಯರು
5. ಶ್ರೀ ಸುಬ್ರಮಣ್ಯಂ, ಸ್ಥಳೀಯರು
6. ಶ್ರೀ ಶ್ರೀನಿವಾಸ್.ಪಿ, ಕಂದಾಯ ನಿರೀಕ್ಷಕರು,
7. ಶ್ರೀ ಜೋಶ್ವ, ಕರ ವಸೂಲಿಗಾರರು,
8. ಶ್ರೀ ವೆಂಕಟಾಚಾರ್ಯ, ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ
9. ಶ್ರೀ ರವಿ, ಮೀಟರ್ ರೀಡರ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ

ಈ ಸಭೆಗೆ ಹಾಜರಾಗಿದ್ದ ಮೇಲ್ಕಂಡ ವಾರ್ಡಿನ ಕಾರ್ಯದರ್ಶಿ / ನೋಡಲ್ ಅಧಿಕಾರಿಗಳು ರವರನ್ನು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

**ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)** ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ಆಯಾ ಇಲಾಖೆಯ ಬಗ್ಗೆ ಮಾಹಿತಿಯನ್ನು ಕೇಳಿದರು.

**1) ಶ್ರೀ ಮುರಳಿ, ಸ್ಥಳೀಯರು ಈ ಕೆಳಕಂಡ ವಿಷಯಗಳ ಬಗ್ಗೆ ವಾರ್ಡ್ ಕಮಿಟಿ ಸಭೆಯಲ್ಲಿ ಪ್ರಸ್ತಾಪಿಸಿದರು.**

ವಾರ್ಡಿನ ಎಂ.ನಾರಯಣಪ್ಪ ರಸ್ತೆಯ ಬಿ.ಡಿ.ಎ. ಪಾರ್ಕ್ ಹತ್ತಿರ ಕಸವನ್ನು ಹಾಕುತ್ತಾರೆ, ಮೈದಾನ ಹೊಳಗಡೆ ಶೌಚಲಯವನ್ನು ಸರಿಪಡಿಸಬೇಕು,ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ LED Light ಅಳವಡಿಸಬೇಕು, ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸರಿಯಾಗಿ ಸರಬರಾಜು ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿದ್ದು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ರವರಿಗೆ ಈ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು.

**2) ಶ್ರೀ ಸುಬ್ರಮಣಿ ಮಾತನಾಡುತ್ತಾ,**

ವಾರ್ಡಿನ ಪ್ರದೇಶದಲ್ಲಿ ಬೀದಿ ದೀಪಗಳ ಸರಿಯಾಗಿ ಉರಿಯದೇ ಇರುವುದರಿಂದ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿದ್ದು, ಇದನ್ನು ಕೂಡಲೇ ಸರಿಪಡಿಸಲು ಕ್ರಮ ವಹಿಸಬೇಕು, ವಾರ್ಡ್ ವ್ಯಾಪ್ತಿಯ ಕೆಲವು ಪ್ರದೇಶಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಬೇಕು, ಕಮ್ಮನಹಳ್ಳಿ ಮುಖ್ಯರಸ್ತೆಯ ಎರಡೂ ಬದಿಯಲ್ಲಿ ಬೀದಿ ಬದಿ ವ್ಯಾಪಾರಿಗಳು ಯಥೇಚ್ಛವಾಗಿ ಅಂಗಡಿಗಳನ್ನು ಇಟ್ಟು ವ್ಯಾಪಾರ ಮಾಡುತ್ತಿರುವುದರಿಂದ ಪಾದಾಚಾರಿ ಮಾರ್ಗದ ತುಂಬಾ ಅಂಗಡಿಗಳು ಇರುವುದರಿಂದ ಪಾದಾಚಾರಿಗಳು ರಸ್ತೆಯಲ್ಲಿ ಓಡಾಡುತ್ತಿದ್ದು, ಇದರಿಂದ ವಾಹನ ಸವಾರರಿಗೆ ಹಾಗೂ ಪಾದಾಚಾರಿಗಳಿಗೆ ತುಂಬಾ ತೊಂದರೆಯಾಗುತ್ತಿದ್ದು, ಇದನ್ನು ಕೂಡಲೇ ತೆರವುಗೊಳಿಸಬೇಕು, ಜೈ ಭಾರತ್ ನಗರದ ಮಾರಿಯಮ್ಮ ದೇವಸ್ಥಾನ ಅಡ್ಡರಸ್ತೆಗಳನ್ನು ಸಿಸಿ ರಸ್ತೆಯಾಗಿ ಅಭಿವೃದ್ಧಿಯಾಗಬೇಕು, ಕಮ್ಮನಹಳ್ಳಿ ವಾರ್ಡಿನಲ್ಲಿ ಕುಡಿಯುವ ನೀರು ಸರಿಯಾಗಿ ಸರಬರಾಜು ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ವಾರ್ಡ್ ವ್ಯಾಪ್ತಿಯ ಪದೆ ಪದೆ ಚೇಂಬರ್‌ಗಳಲ್ಲಿ ಹೂಳನ್ನು ತೆಗೆದು ರಸ್ತೆ ಬದಿಯಲ್ಲಿಯೇ ಹಾಕುತ್ತಿರುವುದರಿಂದ, ತೆಗೆದ ಹೂಳು ಮತ್ತೆ ಅದೇ ರಸ್ತೆಗೆ ಬೀಳುತ್ತಿರುವುದರಿಂದ, ಯಾವುದೇ ಪ್ರದೇಶದ ಚೇಂಬರ್‌ನಿಂದ ತೆಗೆದ ಹೂಳನ್ನು ಆಗಿಂದ್ದಾಗ್ಗೆ ಅಲ್ಲಿಂದ ತೆರವುಗೊಳಿಸಬೇಕು, ಪ್ರಸ್ತುತ ವಾರಕ್ಕೆ 02 ಬಾರಿ ಬಿಡುತ್ತಿದ್ದು, ಅದನ್ನು 03 (ಮೂರು) ಬಾರಿ ಕುಡಿಯುವ ನೀರನ್ನು ಸರಬರಾಜು ಮಾಡಲು ಸಭೆಯಲ್ಲಿ ಪ್ರಸ್ತಾಪಿಸಿದರು.

**ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ,**

ಸಭೆಯಲ್ಲಿ ಪ್ರಸ್ತಾಪಿಸಲಾದ ಕುಂದು ಕೊರತೆ ಹಾಗೂ ದೂರುಗಳಿಗೆ ಸ್ಪಂದಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು, ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ/ ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

**ನೋಡಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

**ಪ್ರತಿಯನ್ನು**

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೆಸ್ಕಾಂ ಇ–8
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಕಾಂಟಾಕ್ಟ್ ಟ್ರೇಸಿಂಗ್ ನೋಡಲ್ ಅಧಿಕಾರಿ, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
11) ಹೋಮ್ ಕ್ವಾರೆಂಟೈನ್ ಸ್ಕ್ವಾಡ್ ನೋಡಲ್ ಅಧಿಕಾರಿ, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
12) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
13) ಸಹಾಕಯ ಕಂದಾಯ ಅಧಿಕಾರಿ. ಮಾರುತಿಸೇವಾನಗರ ಉಪವಿಭಾಗ
14) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
15) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
16) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ
17) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ
18) ಕಛೇರಿ ಪ್ರತಿ.